ರೇಷ್ಮೆ ಮಾರುಕಟ್ಟೆ ನಿಗಮದಲ್ಲಿ 5 ಕೋಟಿ ರೂ. ಅವ್ಯವಹಾರದ ಬಗ್ಗೆ.

313(499)

ಶ್ರೀ ಎ.ರಾಮದಾಸ್(ಕೃಷ್ಣರಾಜ): ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೇಷ್ಮೆ ಮಾರುಕಟ್ಟೆ ಹಾಗೂ ರೇಷ್ಮೆ ಕೈಗಾರಿಕಾ ನಿಗಮದಲ್ಲಿ ಅವ್ಯವಹಾರ ಪ್ರಕರಣ ನಡೆದಿದೆಯೆ?

ಆ) ನಡೆದಿದ್ದಲ್ಲಿ, ಹಗರಣದ ಸ್ವರೂಪ ಎಂತಹದ್ದು, ಹಗರಣದ ಮೊತ್ತವೆಷ್ಟು?

ಇ) ತಪ್ಪಿತಸ್ಥರು ಯಾರೆಂದು ಗುರುತಿಸಲಾಗಿದೆ; ಇಂತಹವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ?

ಈ) ಈ ಅವ್ಯವಹಾರವನ್ನು ಸಿ.ಓ.ಡಿ ತನಿಖೆಗೆ ಒಪ್ಪಿಸಲಾಗಿದೆಯೇ; ತನಿಖೆ ಯಾವ ಹಂತದಲ್ಲಿದೆ?

ಶ್ರೀ ಎಂ.ಮಹದೇವ್ (ರೇಷ್ಮೆ ಮತ್ತು ಜವಳಿ ಸಚಿವರು):

ಅ) ಈ ವಿಷಯವಾಗಿ ಕರ್ನಾಟಕ ರೇಷ್ಮೆ ಕೈಗಾರಿಕಾ ನಿಗಮಕ್ಕೆ ಸಂಬಂಧಿಸಿದಂತೆ ಅವ್ಯವಹಾರ ಕಂಡು ಬಂದಿಲ್ಲ, ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಗೆ ಸಂಬಂಧಿಸಿದ 1999-2000ನೇ ಸಾಲಿನಲ್ಲಿ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮಕ್ಕಾಗಿ ಖರೀದಿಸಿದ ರೇಷ್ಮೆಯಲ್ಲಿ ಅವ್ಯವಹಾರ ನಡೆದಿರುವುದಾಗಿ ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಕೆಹೆಚ್‌ಡಿಸಿಗೆ ಸರಬರಾಜು ಮಾಡಿದ ರೇಷ್ಮೆಯನ್ನು ಗ್ರಿಡ್ ದರಕ್ಕಿಂತ ಹೆಚ್ಚಿಗೆ ದರದಲ್ಲಿ ಖರೀದಿಸಿದ ಬಗ್ಗೆ ನಡೆದ ಅವ್ಯವಹಾರದ ಮೊತ್ತ ಅಂದಾಜು ರೂ. 16 ಲಕ್ಷ.

ಇ) ಹೌದು. ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ಮತ್ತು ಕೈಮಗ್ಗ ಅಭಿವೃದ್ಧಿ ನಿಗಮದ ಅಧಿಕಾರಿಗಳು ಈ ಅವ್ಯವಹಾರದಲ್ಲಿ ಪಾಲ್ಗೊಂಡಿರುವುದರಿಂದ ಪೂರ್ವಭಾವಿ ತನಿಖೆಯನ್ನು ನಡೆಸಿದ್ದು, ಸಂಬಂಧಪಟ್ಟ ರೇಷ್ಮೆ ಮಾರಾಟ ಮಂಡಳಿಯ ಏಳು ಅಧಿಕಾರಿಗಳನ್ನು ಅಮಾನತ್ತುಗೊಳಿಸಿದ್ದು, ಇಲಾಖಾ ವಿಚಾರಣೆ ನಿರೀಕ್ಷಿಸಿ, ಅಮಾನತ್ತನ್ನು ರದ್ದುಗೊಳಿಸಲಾಗಿದೆ.

ಈ) ಈ ಅವ್ಯವಹಾರವನ್ನು ಸಿ.ಓ.ಡಿ. ತನಿಖೆಗೆ ವಹಿಸುವ ಪ್ರಸ್ತಾಪ ಸರ್ಕಾರದ ಪರಿಶೀಲನೆಯಲ್ಲಿದೆ.